ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2152
ಸದಸ್ಯರ ಹೆಸರು : ಶ್ರೀ ಎನ್.ರವಿಕುಮಾರ್
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 25.03.2021
ಉತ್ತರಿಸುವ ಸಚಿವರು : ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ಕ್ರ.ಸ	ಪ್ರಶ್ನೆ	ಉತ್ತರ
ಅ	ರಾಮನಗರ ಜಿಲ್ಲೆ ಬಿಡದಿ ಹೋಬಳಿ, ಶಾನಮಂಗಲ ಬಿಲ್ಲಕೆಂಪನ ಹಳ್ಳಿ ಮತ್ತು ಬಾಣಂದೂರು ಗ್ರಾಮದಲ್ಲಿ ಅಕ್ರಮವಾಗಿ ಸರಕಾರಿ ಜಮೀನನ್ನು ಒತ್ತುವರಿ ಮಾಡಿ ಈಗಲ್ಟನ್ ರೆಸಾರ್ಟ್‌ಗಳನ್ನು ಅಕ್ರಮವಾಗಿ ನಡೆಸುತ್ತಿದ್ದು, ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗಿರುವ ಕುರಿತು ಇದುವರೆಗೆ ಎಷ್ಟು ದೂರುಗಳು ದಾಖಲಾಗಿವೆ;	ಇಲ್ಲಿಯವರೆಗೆ ಯಾವುದೇ ದೂರುಗಳು ದಾಖಲಾಗಿರುವುದಿಲ್ಲ.
ಆ	ಈಗಲ್ಟನ್ ರೆಸಾರ್ಟ್‌ನಲ್ಲಿ ನಡೆಸುತ್ತಿರುವ ಅಕ್ರಮ ವ್ಯವಹಾರಗಳಿಗೆ ಪೊಲೀಸ್ ಇಲಾಖೆಯು ಭಾಗಿಯಾಗಿರುವ ಕುರಿತು ಮಾಧ್ಯಮಗಳಲ್ಲಿ ವರದಿಯಾಗಿದ್ದು, ಈ ಕುರಿತು ಸರ್ಕಾರದ ನಿಲುವೇನು;	ಈಗಲ್ಟನ್ ರೆಸಾರ್ಟ್‌ನಲ್ಲಿ ನಡೆಯುತ್ತಿರುವ ಅಕ್ರಮ ವ್ಯವಹಾರಗಳಿಗೆ ಪೊಲೀಸ್ ಅಧಿಕಾರಿಗಳು ಶಾಮೀಲಾಗಿರುವ ಬಗ್ಗೆ ಯಾವುದೇ ದೂರುಗಳು ಬಂದಿರುವುದಿಲ್ಲ. ಆ ರೀತಿಯ ದೂರುಗಳು ಬಂದರೆ ಅಂತಹ ಪೊಲೀಸ್ ಅಧಿಕಾರಿಗಳ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು.
ಇ	ಈ ಅಕ್ರಮ ರೆಸಾರ್ಟ್‌ನಲ್ಲಿ ನಡೆಯುತ್ತಿರುವ ಅಕ್ರಮಗಳಿಗೆ ಸಹಾಯ ಮಾಡುತ್ತಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ಈ ರೆಸಾರ್ಟ್ ಮೇಲೆ ಅಕ್ರಮಗಳ, ಅವ್ಯವಹಾರಗಳ ತನಿಖೆಗಾಗಿ ಇದುವರೆವಿಗೆ ಎಷ್ಟು ಬಾರಿ ಪೊಲೀಸ್ ದಾಳಿಗಳಾಗಿವೆ; ಯಾವ ರೀತಿಯ ಅಕ್ರಮಗಳನ್ನು ಪತ್ತೆ ಹಚ್ಚಲಾಗಿದೆ; ಇದುವರೆಗೆ ಈಗಲ್ಟನ್ ರೆಸಾರ್ಟ್ ಮೇಲೆ ದಾಖಲಾಗಿರುವ ಪ್ರಕರಣಗಳು ಎಷ್ಟು; ಪ್ರಸ್ತುತ ಅವು ಯಾವ ಹಂತದಲ್ಲಿವೆ?	ಅಧಿಕಾರಿಗಳ ವಿರುದ್ಧ ಯಾವುದೇ ದೂರುಗಳು ದಾಖಲಾಗಿರುವುದಿಲ್ಲ. ಈಗಲ್ಟನ್ ರೆಸಾರ್ಟ್‌ಗಳ ಅಕ್ರಮಗಳಿಗೆ ಸಂಬಂಧಪಟ್ಟಂತೆ ಒಂದು ಬಾರಿ ದಾಳಿಯನ್ನು ನಡೆಸಿ ಒಂದು ಪ್ರಕರಣವನ್ನು ದಾಖಲು ಮಾಡಲಾಗಿರುತ್ತದೆ. ಇದುವರೆವಿಗೆ ಈಗಲ್ಟನ್ ರೆಸಾರ್ಟ್‌ನಲ್ಲಿ 02 ಪ್ರಕರಣಗಳು ದಾಖಲಾಗಿದ್ದು, ಒಂದು ಮನೆ ಜೂಜಾಟದ ಪ್ರಕರಣವಾಗಿದ್ದು, ಮತ್ತೊಂದು ಕೊಲೆ ಯತ್ನ ಪ್ರಕರಣವಾಗಿರುತ್ತದೆ. ಸದರಿ ಎರಡೂ ಪ್ರಕರಣಗಳು ನ್ಯಾಯಾಲಯದ ವಿಚಾರಣಾ ಹಂತದಲ್ಲಿರುತ್ತವೆ.

ಹೆಚ್‌ಡಿ 215 ಎಸ್‌ಎಸ್‌ಟಿ 2021

(ಬಸವರಾಜ ಬೊಮ್ಮಾಯಿ)
ಗೃಹ ಮತ್ತು ಕಾನೂನು, ಸಂಸದೀಯ
ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು